# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-366ರಲ್ಲಿನ ಘೋಷಣೆಯಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ ಯಾತ್ರಾರ್ಥಿಗಳಿಗೆ ಸಹಾಯಾನುದಾನವನ್ನು ನೀಡುವ ಕುರಿತು.

ಓದಲಾಗಿದೆ:-
1. 2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ 366.
2. ಸರ್ಕಾರದ ಆದೇಶ ಸಂಖ್ಯೆ:ಕಂಇ 174 ಮುಅಬಿ 2022, ದಿನಾಂಕ:11.04.2022.
3. ಪತ್ರ ಸಂಖ್ಯೆ:ಚಾರ್‌ಧಾಮ್ ಮಾನಸ ಸರೋವರ /ಸಿಆರ್/01/2021-22 ದಿನಾಂಕ:05.04.2022
4. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 315 ವೆಚ್ಚ-7/2022, ದಿನಾಂಕ:07.04.2022/08.04.2022.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ 2022-23ನೇ ಆಯವ್ಯಯ ಭಾಷಣದ ಕಂಡಿಕೆ (366)ರಲ್ಲಿ ಈ ಕೆಳಕಂಡಂತೆ ಘೋಷಣೆ ಮಾಡಲಾಗಿದೆ.

**"ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ 5000/-ರೂ.ಗಳ ಸಹಾಯ ಧನವನ್ನು ನೀಡಲಾಗುವುದು"**

ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿನ ಸರ್ಕಾರದ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಕಂಡಿಕೆ-366ರಲ್ಲಿನ ಘೋಷಣೆಯಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ ರೂ.5000/-ರೂ.ಗಳ ಸಹಾಯ ಧನವನ್ನು ನೀಡಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರಲ್ಲಿನ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಪ್ರಸ್ತಾವನೆಯಲ್ಲಿ 2022-23ನೇ ಆಯವ್ಯಯ ಭಾಷಣ ಕಂಡಿಕೆ (366) ರಲ್ಲಿ " ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ ರೂ.5000/-ರೂ.ಗಳ ಸಹಾಯ ಧನವನ್ನು ನೀಡಲಾಗುವುದು" ಎಂಬುದಾಗಿ ಘೋಷಿಸಿದ್ದು, ಆಯವ್ಯಯ ಘೋಷಣೆಯಂತೆ 30,000 ಯಾತ್ರಾರ್ಥಿಗಳಿಗೆ ಒಬ್ಬರಿಗೆ ರೂ.5000/-ಗಳಂತೆ ಒಟ್ಟು ರೂ.15.00 ಕೋಟಿಗಳ ಅನುದಾನ ಅವಶ್ಯಕವಿರುತ್ತದೆ. ಅದರಂತೆ ಕಾಶಿಯಾತ್ರೆ ಕೈಗೊಂಡು ಸಹಾಯಧನ ಕೋರಿ ಅರ್ಜಿ ಸಲ್ಲಿಸುವ ಅರ್ಹ ಯಾತ್ರಾರ್ಥಿಗಳಿಗೆ ತಲಾ ರೂ.5000/-ಗಳಂತೆ ಸಹಾಯಧನವನ್ನು ವಿತರಿಸುವ ಸಂಬಂಧ ಅನುಬಂಧದಲ್ಲಿನ ಅಂಶಗಳನ್ನೊಳಗೊಂಡಂತೆ ಸರ್ಕಾರದಿಂದ ಮಾರ್ಗಸೂಚಿಯನ್ನು ಹೊರಡಿಸುವ ಬಗ್ಗೆ ಹಾಗೂ ಆಯವ್ಯಯ ಕಂಡಿಕೆ-(366)ರಂತೆ 30,000 ಯಾತ್ರಾರ್ಥಿಗಳಿಗಾಗಿ ರೂ.15.00 ಕೋಟಿಗಳ ಅನುದಾನವನ್ನು ಮಂಜೂರು ಮಾಡಿ ಬಿಡುಗಡೆ ಮಾಡಲು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿನ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಪ್ರಸ್ತಾವನೆಗೆ ಸಂಬಂಧಿಸಿದಂತೆ ಆಯವ್ಯಯ ಭಾಷಣ ಕಂಡಿಕೆ-366ನ್ನು ಅನುಷ್ಠಾನಗೊಳಿಸಲು

......2

ಲೆಕ್ಕ ಶೀರ್ಷಿಕೆ 2250-00-103-5-08-100 Assistance to Manasa sarovar Piligrims ಅಡಿಯಲ್ಲಿ ರೂ.700.00 ಲಕ್ಷಗಳನ್ನು ಒದಗಿಸಲಾಗಿದೆ. ಆಯವ್ಯಯದಲ್ಲಿ ಒದಗಿಸಿರುವ ಅನುದಾನದ ಮಿತಿಗೆ ಒಳಪಟ್ಟು ಈ ಘೋಷಣೆಯನ್ನು ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಪ್ರಸ್ತಾವನೆಯನ್ವಯ ಮತ್ತು ಆರ್ಥಿಕ ಇಲಾಖೆಯ ಸಹಮತಿಯನ್ವಯ ಸರ್ಕಾರವು ಈ ಕೆಳಕಂಡಂತೆ ತೀರ್ಮಾನಿಸಿ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: RD/174/MABI /2022,</u>**
**<u>ಬೆಂಗಳೂರು, ದಿನಾಂಕ: 27ನೇ ಜೂನ್,2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2022-23ನೇ ಆಯವ್ಯಯ ಭಾಷಣ ಕಂಡಿಕೆ (366)ರಂತೆ ರಾಜ್ಯದಿಂದ ಕಾಶಿ ಯಾತ್ರೆಯನ್ನು ಕೈಗೊಳ್ಳುವ 30,000 ಯಾತ್ರಾರ್ಥಿಗಳಿಗೆ ಸರ್ಕಾರದಿಂದ ತಲಾ ರೂ.5000/-ಗಳ ಸಹಾಯ ಧನವನ್ನು ನೀಡಲು ಲೆಕ್ಕ ಶೀರ್ಷಿಕೆ: "2250-00-103-5-08-100 Assistance to Manasa Sarovar Piligrims ಅಡಿಯಲ್ಲಿ ಒದಗಿಸಿರುವ ರೂ.700.00 ಲಕ್ಷ (ಏಳು ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ರವರಿಗೆ ಬಿಡುಗಡೆಗೊಳಿಸಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಬಂಧದಲ್ಲಿರುವ ಮಾರ್ಗಸೂಚಿಗಳನ್ನು ಅನುಸರಿಸತಕ್ಕದ್ದು;

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M.L. Varalakshmi
**(ಎಂ.ಎಲ್.ವರಲಕ್ಷ್ಮಿ)** 27/6/22
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ ಇಲಾಖೆ)

**<u>ಇವರಿಗೆ:</u>**

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್.ಎಸ್.ಎ.)ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ&ಆರ್.ಎಸ್.ಎ.)ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು, (ಎ&ಇ)ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ ಇವರ ಆಪ್ತ ಕಾರ್ಯದರ್ಶಿ
5. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಯುವ ಸಬಲೀಕರಣ, ಕ್ರೀಡಾ ಹಾಗೂ ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-7&8, ವಿಧಾನಸೌಧ, ಬೆಂಗಳೂರು.
8. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ , ಬಹುಮಹಡಿಗಳ ಕಟ್ಟಡ, ಬೆಂಗಳೂರು.

**<u>ಪ್ರತಿ:</u>**

1. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಧಾರ್ಮಿಕ ದತ್ತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
5. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ಧಾರ್ಮಿಕ ದತ್ತಿ) ಇವರ ಆಪ್ತ ಕಾರ್ಯದರ್ಶಿ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

# ಅನುಬಂಧ

**ಸರ್ಕಾರದ ಆದೇಶ ಸಂಖ್ಯೆ: RD/174/MABI/2022,**
**ಬೆಂಗಳೂರು, ದಿನಾಂಕ: 27-06-2022.**

**ಕಾಶಿಯಾತ್ರೆ ಕೈಗೊಳ್ಳಲು ಅನುಸರಿಸಬೇಕಾದ ಮಾರ್ಗಸೂಚಿಗಳು**

1. ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆ ಕೈಗೊಂಡ ಅರ್ಹ ಯಾತ್ರಾರ್ಥಿಗಳಿಗೆ ತಲಾ ರೂ.5,000/-ಗಳನ್ನು ಸಹಾಯ ಧನವಾಗಿ ನೀಡಲಾಗುವುದು.

2. ಕರ್ನಾಟಕದ ಖಾಯಂ ನಿವಾಸಿಗಳು ಮಾತ್ರ ಈ ಧನ ಸಹಾಯ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ. ಈ ಉದ್ದೇಶಕ್ಕಾಗಿ ಕೆಳಕಂಡ ಯಾವುದಾದರೂ ಒಂದು ದಾಖಲೆಗಳನ್ನು ಕಡ್ಡಾಯವಾಗಿ ಒದಗಿಸತಕ್ಕದ್ದು.
   - ಕರ್ನಾಟಕ ರಾಜ್ಯ ಚುನಾವಣಾ ಆಯೋಗ ನೀಡಿರುವ "ಗುರುತಿನ ಚೀಟಿ" ಅಥವಾ
   - ಆಧಾರ್ ಗುರುತಿನ ಚೀಟಿ ಅಥವಾ
   - ರೇಷನ್ ಕಾರ್ಡ್.

3. ಕರ್ನಾಟಕ ರಾಜ್ಯದಿಂದ ಕಾಶಿ ಯಾತ್ರೆ ಕೈಗೊಳ್ಳುವ ಯಾತ್ರಾರ್ಥಿಗಳು ಆಯಾ ಆರ್ಥಿಕ ವರ್ಷದ ಮೊದಲ ದಿನಕ್ಕೆ ಅನ್ವಯಿಸುವಂತೆ ಏಪ್ರಿಲ್ 1 ಕ್ಕೆ 18 ವರ್ಷಗಳ ಮೇಲ್ಪಟ್ಟವರಾಗಿರತಕ್ಕದ್ದು, 18 ವಯಸ್ಸಿನ ಕೆಳಗಿನವರ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. 18 ವರ್ಷ ಮೇಲ್ಪಟ್ಟ ಯಾತ್ರಾರ್ಥಿಗಳು ವಯಸ್ಸಿಗೆ ಸಂಬಂಧಿಸಿದ ಸೂಕ್ತ ದಾಖಲೆಯನ್ನು ಹಾಜರುಪಡಿಸುವುದು.

4. ದಿನಾಂಕ:01-04-2022 ರಿಂದ ದಿನಾಂಕ:30-06-2022ರವರೆಗೆ ಕಾಶಿ ಶ್ರೀ ವಿಶ್ವನಾಥ ಸ್ವಾಮಿಯ ದರ್ಶನಕ್ಕೆ ತೆರಳಿದ ಯಾತ್ರಾರ್ಥಿಗಳು ಸಂಬಂಧಿಸಿದ ದಾಖಲಾತಿ (ಕಾಶಿ ಶ್ರೀ ವಿಶ್ವನಾಥ ಸ್ವಾಮಿ ದೇವಾಲಯಕ್ಕೆ ತೆರಳಲು ಮುಂಗಡವಾಗಿ ಕಾಯ್ದಿರಿಸಿದ ಮತ್ತು ಹಿಂದಿರುಗಿದ ಬಗ್ಗೆ ಕಾಯ್ದಿರಿಸಿದ ಟಿಕೇಟ್, ಛಾಯಾಚಿತ್ರ, ಪೂಜಾ ರಶೀದಿ, ಅಥವಾ ದೇವಾಲಯಕ್ಕೆ ತೆರಳಿ/ಮರಳಿದ ಬಗ್ಗೆ ಯಾವುದಾದರೂ ಇತರೆ ದಾಖಲೆ)ಗಳನ್ನು ಮುದ್ದಾಂ ಆಗಿ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಇವರ ಕಛೇರಿಗೆ ಸಲ್ಲಿಸತಕ್ಕದ್ದು.

5. ದಿನಾಂಕ:01.07.2022 ರಿಂದ ಅನ್ವಯವಾಗುವಂತೆ ಯಾತ್ರಾರ್ಥಿಗಳು ಕಾಶಿ ಯಾತ್ರೆ ಕೈಗೊಂಡಿರುವ ಬಗ್ಗೆ, ಸಂಬಂಧಿಸಿದ ದಾಖಲೆಗಳನ್ನು ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಛತ್ರ, ವಾರಣಾಸಿ ಇವರ ಕಛೇರಿಯಿಂದ ಬಯೋಮೆಟ್ರಿಕ್ ದೃಢೀಕರಣದೊಂದಿಗೆ, ಆನ್‌ಲೈನ್ ಅಥವಾ ಮುದ್ದಾಂ/ನೊಂದಾಯಿತ ಅಂಚೆ ಮೂಲಕ, ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ ಇವರ ಕಛೇರಿಗೆ ಸಲ್ಲಿಸತಕ್ಕದ್ದು ಒಂದು ವೇಳೆ ವ್ಯವಸ್ಥಾಪಕರು ಕರ್ನಾಟಕ ರಾಜ್ಯ ಛತ್ರ, ವಾರಣಾಸಿ ಇವರ ದೃಢೀಕರಣ ಇಲ್ಲದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

6. ಯಾತ್ರಾರ್ಥಿಗಳು ಸಹಾಯಧನವನ್ನು ಒಂದು ಬಾರಿ ಪಡೆದ ನಂತರದಲ್ಲಿ, ಅದೇ ವ್ಯಕ್ತಿಗೆ ಎರಡನೇ ಬಾರಿ ಅನುದಾನ ನೀಡಲು ಪರಿಗಣಿಸಲಾಗುವುದಿಲ್ಲ.

7. ಸರ್ಕಾರದ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸುವ ಯಾತ್ರಾರ್ಥಿಗಳ ಬ್ಯಾಂಕ್ ಖಾತೆಯು ರಾಷ್ಟ್ರೀಕೃತ ಬ್ಯಾಂಕಿನ ಖಾತೆಯಾಗಿರಬೇಕು ಮತ್ತು ಕಡ್ಡಾಯವಾಗಿ ಆಧಾರ್ ಲಿಂಕ್ ಆಗಿರತಕ್ಕದ್ದು.

8. ಸದರಿ ಸಹಾಯಧನವನ್ನು ಯಾತ್ರೆಯನ್ನು ಪೂರ್ಣಗೊಳಿಸಿ ಸಂಬಂಧಿಸಿದ ದಾಖಲೆಗಳನ್ನು ನಿಗಧಿತ ನಮೂನೆ ಅರ್ಜಿಯನ್ನು ಭರ್ತಿ ಮಾಡಿ ಒದಗಿಸಿದ ನಂತರ ಸದರಿ ಅರ್ಜಿಗಳನ್ನು ಧಾರ್ಮಿಕ ದತ್ತಿ ಆಯುಕ್ತರು ಸ್ವೀಕರಿಸಿ, ಪರಿಶೀಲಿಸಿ ಅನುದಾನ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದು.

......2

9. ಕಾಶಿ ಯಾತ್ರೆ ಪೂರ್ಣಗೊಳಿಸಿದ ಯಾತ್ರಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ತಮ್ಮ ಅರ್ಜಿಗಳನ್ನು ಗರಿಷ್ಠ 30000 ಯಾತ್ರಾರ್ಥಿಗಳ ಅರ್ಜಿಗಳು ಸ್ವೀಕೃತವಾಗುವವರೆಗೆ ಸಹಾಯಧನ ಮಂಜೂರು ಮಾಡಲು ಪರಿಗಣಿಸಲಾಗುವುದು. ನಂತರ ಸ್ವೀಕೃತವಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ, ಸದರಿ ಸಹಾಯಧನವನ್ನು ಆಯಾ ಆರ್ಥಿಕ ಸಾಲಿನಲ್ಲಿ ಯಾತ್ರೆ ಕೈಗೊಂಡ ಯಾತ್ರಾರ್ಥಿಗಳಿಗೆ ಮಾತ್ರ ಮಂಜೂರು ಮಾಡಲಾಗುವುದು.

10. ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನ ಲಭ್ಯತೆಗನುಗುಣವಾಗಿ ಯಾತ್ರಾರ್ಥಿಗಳಿಗೆ ಸಹಾಯಧನವನ್ನು ನೀಡಲಾಗುವುದರಿಂದ ಮೊದಲು ಬಂದ ಯಾತ್ರಾರ್ಥಿಗಳಿಗೆ ಆದ್ಯತೆಯನ್ನು ನೀಡಲಾಗಿರುತ್ತದೆ.

M.L.Varalakshmi
(ಎಂ.ಎಲ್.ವರಲಕ್ಷ್ಮಿ) 27/6/22
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ (ಧಾರ್ಮಿಕ ದತ್ತಿ ಇಲಾಖೆ)